ಈ) 2008–09 ಮತ್ತು 2009–10ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಗ್ರಾಮಪಂಚಾಯಿತಿಗೆ ನೀಡಲಾದ ಗುರಿಗೆ ಎದುರಾಗಿ ಗ್ರಾಮಪಂಚಾಯಿತಿಗಳು ಗ್ರಾಮಸಭೆಗಳ ಮೂಲಕ ಆಯ್ಕೆ ಮಾಡಿ ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯ್ತಿತಿಯ ಅನುಮೋದನೆ ಪಡೆದು ನಿಗಮಕ್ಕೆ ಸಲ್ಲಿಸಲಾದ ಪಟ್ಟಿಗೆ ಮಾತ್ರ ಅನುಮೋದನೆ ನೀಡಲಾಗಿರುತ್ತದೆ. ಈ ಪದ್ಧತಿಯನ್ನು ಹೊರತುಪಡಿಸಿ ನೇರವಾಗಿ ನಿಗಮಕ್ಕೆ ಸಲ್ಲಿಸಲಾದ ಯಾವುದೇ ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿರುವುದಿಲ್ಲ.

ಬೆಳಗಾವಿಯ ಚಿಕ್ಕೋಡಿ ಪುರಸಭೆಗೆ 2009–10ನೇ ಸಾಲಿನ ಸಿ.ಎಂ.ಎಸ್. ಎಂ.ಟಿ.ಪಿ ಯೋಜನೆಯ ಬಗ್ಗೆ

199 (428) ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಚಿಕ್ಕೋಡಿ ಸದಲಗಾ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ, ಚಿಕ್ಕೋಡಿ ಪುರಸಭೆಗೆ 2009–10ನೇ ಸಾಲಿನ ಸಿಎಂಎಸ್‌ಎಂಟಿಡಿಪಿ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನವೆಷ್ಟು; ಈ ಪುರಸಭೆ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆಯೇ;

ಆ) ಕ್ರಿಯಾ ಯೋಜನೆಯನ್ನು ತಯಾರಿಸಲು ಅನುಸರಿಸಬೇಕಾದ ಮಾನದಂಡಗಳೇನು; ಸ್ಥಳೀಯ ಶಾಸಕರ ಸಹಮತಿ ಈ ಯೋಜನೆಗೆ ಅವಶ್ಯವಿಲ್ಲವೆ; ಶಾಸಕರ ಸಹಮತಿ ಇಲ್ಲದೇ ಕ್ರಿಯಾ ಯೋಜನೆ ತಯಾರಿಸಲಾಗಿದೆಯೇ; ಹಾಗೆಯೇ ತಯಾರಿಸಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)?

ಶ್ರೀ ಎಸ್. ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಬೆಳಗಾವಿ ಜಿಲ್ಲೆ ಚಿಕ್ಕೋಡಿ ಪುರಸಭೆಗೆ ಸಿಎಂಎಸ್ ಎಂಟಿಡಿಪಿ ಯೋಜನೆಯಡಿ ರೂ.500.00 ಲಕ್ಷಗಳನ್ನು ನಿಗದಿಪಡಿಸಲಾಗಿದ್ದು, ಇದರಲ್ಲಿ ರೂ.410.00 ಲಕ್ಷಗಳ ಕ್ರಿಯಾ ಯೋಜನೆಗೆ ಮಂಜೂರಾತಿ ನೀಡಲಾಗಿದೆ. ಉಳಿದ ರೂ.90.00 ಲಕ್ಷಗಳಿಗೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.'

ಆ) ಕ್ರಿಯಾ ಯೋಜನೆಯನ್ನು ತಯಾರಿಸಲು ಸ್ಥಳೀಯ ಶಾಸಕರ ಸಹಮತಿ ಅವಶ್ಯಕತೆ ಇರುತ್ತದೆ. ಅದರಂತೆ ಸ್ಥಳೀಯ ಶಾಸಕರು ಕಾಮಗಾರಿ ಪಟ್ಟಿಯನ್ನು ಕ್ರಿಯಾ ಯೋಜನೆಯಲ್ಲಿ ಅಳವಡಿಸಲು ನೀಡಿರುತ್ತಾರೆ. ಅದನ್ನು ಉಪ ವಿಭಾಗಾಧಿಕಾರಿಗಳು ಚಿಕ್ಕೋಡಿ ಇವರು ಪರಿಶೀಲನೆ ಮಾಡಿ ಕ್ರಿಯಾ ಯೋಜನೆಯನ್ನು ಮಾರ್ಪಾಡು ಮಾಡಿ ಸಲ್ಲಿಸಿರುತ್ತಾರೆ. ಅದನ್ನು ಜಿಲ್ಲಾ ಉಸ್ತುವಾರಿ ಸಚಿವರ ಅನುಮೋದನೆ ಪಡೆದು, ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಇವರ ಶಿಫಾರಸ್ಸಿನಂತೆ ರೂ.410.00 ಲಕ್ಷಗಳ ಕ್ರಿಯಾ ಯೋಜನೆಗೆ ಸರ್ಕಾರವು ದಿನಾಂಕ: 15–12–2009 ರಂದು ಅನುಮೋದನೆ ನೀಡಿ ಆದೇಶಿಸಿದೆ. ಹಾಗೂ ರೂ.90.00 ಲಕ್ಷಗಳ ಕ್ರಿಯಾ ಯೋಜನೆಯ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಂದ ನಿರೀಕ್ಷಿಸಲಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ವಾರ್ಡ್‌ಗಳ ಮರುವಿಂಗಡಣೆ

201 (430) ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಚಿಕ್ಕೋಡಿ ಸದಲಗ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕ್, ಸದಲಗ ಪಟ್ಟಣ ಪಂಚಾಯಿತಿಯಲ್ಲಿರುವ ಜನಸಂಖ್ಯೆ ಎಷ್ಟು;

ಆ) ಈ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹಿಂದೆ ಇದ್ದ ವಾರ್ಡಗಳ ಸಂಖ್ಯೆ ಎಷ್ಟು; ವಾರ್ಡಗಳ ಪುನರ್ ವಿಂಗಡಣೆಯಾದ ನಂತರ ಇರುವ ವಾರ್ಡಗಳ ಸಂಖ್ಯೆ ಎಷ್ಟು, ವಾರ್ಡವಾರು ವಿವರ ನೀಡುವುದು, ಈ ಮರುವಿಂಗಡಣೆ ಕಾರ್ಯಕ್ಕೆ ಎಷ್ಟು ವೆಚ್ಚ ಮಾಡಲಾಗಿದೆ;

ಇ) ಅವೈಜ್ಞಾನಿಕವಾಗಿ ವಾರ್ಡ ಮರುವಿಂಗಡಣೆಗೆ ಖರ್ಚು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದರೆ ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಸ್. ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) 2001ರ ಜನಗಣತಿಯನ್ವಯ ಒಟ್ಟು ಜನಸಂಖ್ಯೆ 20,202

ಆ)

1. ಹಿಂದೆ ಇದ್ದ ವಾರ್ಡಗಳ ಸಂಖ್ಯೆ. 16